ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೮

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತ ನಾಲ್ಕನೇ ಅಧಿವೇಶನ

## ಗುರುವಾರ, ದಿನಾಂಕ: ೨೨ನೇ ಫೆಬ್ರವರಿ, ೨೦೧೮

---

**ಸಮೂಹ – IV**

೧. ಮುಖ್ಯಮಂತ್ರಿಗಳು.
೨. ಗೃಹ ಸಚಿವರು.
೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.
೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.
೫. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.
೬. ಅಬಕಾರಿ ಸಚಿವರು.

---

### ಹುಬ್ಬಳ್ಳಿ ಜಿಮಖಾನ ಸ್ಪೋರ್ಟ್ಸ್ ಕ್ಲಬ್ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೦೬ (೧೦೦೯) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹುಬ್ಬಳ್ಳಿ ದೇಶಪಾಂಡೆ ನಗರದಲ್ಲಿರುವ ಹುಬ್ಬಳ್ಳಿ ಸ್ಪೋರ್ಟ್ಸ್ ಗ್ರೌಂಡ್‌ನ್ನು ಯಾವ ದಿನಾಂಕದಿಂದ ಹುಬ್ಬಳ್ಳಿ ಅಸೋಸಿಯೇಷನ್‌ರವರಿಗೆ ಯಾವಾಗ ಹಸ್ತಾಂತರ ಮಾಡಲಾಗಿದೆ ; ಅಲ್ಲಿಂದ ಎಲ್ಲಿಯವರೆಗೆ ಸದರಿ ಕ್ರೀಡಾಂಗಣವು ಯಾರ ಸುಪರ್ದಿಯಲ್ಲಿದೆ ;

(ಆ) ಇದು ಸಾರ್ವಜನಿಕ ಮೈದಾನವೇ ; ಅಥವಾ ಖಾಸಗಿ ವ್ಯಕ್ತಿಗಳ ಒಡೆತನದಲ್ಲಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಮೈದಾನವನ್ನು ೨೦೦೮ ರಿಂದ ಯಾರಿಗೆ ಕೊಡಲಾಗಿದೆ ; ಕೊಟ್ಟಿದ್ದರೆ ಕಾರಣವೇನು ; ಇದನ್ನು ಸಾರ್ವಜನಿಕರಿಗಾಗಿ ಮೀಸಲು ಇಟ್ಟಿದ್ದನ್ನು ಈಗ ಸಾರ್ವಜನಿಕರ ಉಪಯೋಗಕ್ಕೆ ನಿಷೇಧಿಸಲು ಕಾರಣವೇನು ;

(ಈ) ಪ್ರಸ್ತುತ ಸದರಿ ಮೈದಾನವನ್ನು ಬೇರೆಯವರು ತಮ್ಮ ವಶದಲ್ಲಿಟ್ಟುಕೊಂಡು ಅದನ್ನು ಕ್ಲಬ್ ಆಗಿ ಪರಿವರ್ತಿಸಲು ಕಾರಣವೇನು ; ಹಾಗೂ ಇಲ್ಲಿ ಯಾವ ಯಾವ ಚಟುವಟಿಕೆಗಳು ನಡೆಯುತ್ತಿವೆ ; ಈ ಹಿಂದೆ ಹಸ್ತಾಂತರ ಮಾಡಲಾಗಿದ್ದು, ಸರ್ಕಾರದಿಂದ ಮಾಡಿದ್ದರೆ ಕಾರಣಗಳೇನು ;

(ಉ) ಸರ್ಕಾರವು ಈ ಕೂಡಲೇ ಸದರಿ ಮೈದಾನವನ್ನು ವಶಕ್ಕೆ ತೆಗೆದುಕೊಂಡು ಸಾರ್ವಜನಿಕರಿಗೆ ಮುಕ್ತವಾಗಿ ಇಡಲು ಕ್ರಮ ಕೈಗೊಳ್ಳಲಿದೆಯೇ ;

(ಊ) ಸದರಿ ಮೈದಾನದಲ್ಲಿ ಹೊಸ ಕಟ್ಟಡಗಳನ್ನು ಹಾಗೂ ಬೇರೆ ಬೇರೆ ಕಾಮಗಾರಿಗಳನ್ನು ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾನೂನುಬಾಹಿರವಾದ ಮತ್ತು ಅಕ್ರಮವಾಗಿ ಕಟ್ಟಡ ನಿರ್ಮಿಸಲು ಅನುಮತಿಯನ್ನು ನೀಡಲಾಗಿರುವುದು ಏಕೆ ; ಇದಕ್ಕೆ ಹೊಣೆಗಾರರು ಯಾರು? (ವಿವರ ನೀಡುವುದು)

## ಸರ್ಕಾರಿ ನೌಕರರಿಗೆ ಮುಂಬಡ್ತಿ ನೀಡುವ ಕುರಿತು ಸುಪ್ರೀಂ ಕೋರ್ಟ್ ಆದೇಶ ಪಾಲನೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭ (೧೦೩೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ನೌಕರರಿಗೆ ಮುಂಬಡ್ತಿ ನೀಡುವ ವಿಚಾರಕ್ಕೆ ಸಂಬಂಧಪಟ್ಟಂತೆ ಬಿ.ಕೆ.ಪವಿತ್ರ ವರ್ಸಸ್ ಕೇಂದ್ರ ಸರ್ಕಾರದ ನಡುವಿನ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ನೀಡಿರುವ ಆದೇಶವೇನು ; ಆದೇಶದ ಸಂಪೂರ್ಣ ವಿವರಗಳನ್ನು ಒದಗಿಸುವುದು ;

(ಆ) ಸುಪ್ರೀಂಕೋರ್ಟ್ ಆದೇಶವನ್ನು ಪಾಲನೆ ಮಾಡಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಪರಿಷ್ಕೃತ ಪಟ್ಟಿ ತಯಾರಿಸಿದ ಇಲಾಖೆಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ೧೯೭೮ರ ನಂತರ ರಾಜ್ಯದಲ್ಲಿ ವಿಭಜನೆಗೊಂಡಿರುವ ಇಲಾಖೆಗಳು ಯಾವುವು; ವಿಭಜನೆಗೊಂಡ ನಂತರ ಈ ಇಲಾಖೆಗಳು ನಂತರದ ದಿನಗಳಿಂದ ಆದೇಶವನ್ನು ಪಾಲಿಸಬೇಕೆ ; (ಇಲಾಖಾವಾರು ವಿವರ ನೀಡುವುದು)

(ಈ) ಈ ವಿಚಾರದಲ್ಲಿ ಸಿ.ಆ.ಸು.ಇ. ಮತ್ತು ಕಾನೂನು ಇಲಾಖೆಗಳ ಅಭಿಪ್ರಾಯಗಳೇನು ; ಈ ಇಲಾಖೆಗಳು ವಿಭಿನ್ನ ಅಭಿಪ್ರಾಯಗಳನ್ನು

ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ರಾಜ್ಯ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು ;

(ಉ) ಸುಪ್ರೀಂಕೋರ್ಟ್ ತೀರ್ಪನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

**ದಿನಗೂಲಿ ನೌಕರರಿಗೆ ಸೇವಾ ಸೌಲಭ್ಯಗಳನ್ನು ವಿಸ್ತರಣೆ ಮಾಡುವ ಬಗ್ಗೆ**

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೮ (೯೭೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ದಿನಗೂಲಿ ನೌಕರರು ಕಳೆದ ೩೦ ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರಿ ಆದೇಶದ ರೀತ್ಯಾ ಪ್ರಸ್ತುತ, ಮಾಹೆಯಾನ ಸರಾಸರಿ ೧೭೦೦೦.೦೦ ರೂ.ಗಳು ಇದ್ದು, ವೇತನದಿಂದ ಜೀವನ ನಿರ್ವಹಣೆ ಮಾಡುವುದು ಅಸಾಧ್ಯವಾಗಿದ್ದು, ತುಟ್ಟಿ ಭತ್ಯೆ ಮತ್ತು ಮನೆ ಬಾಡಿಗೆ ಭತ್ಯೆಯನ್ನು ಕನಿಷ್ಟ ಶೇಕಡ ೮೫ಕ್ಕೆ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು ೨೦೧೩ ನಿಯಮ ೪(೪)ರನ್ವಯ ಪಿಂಚಣಿ ಯೋಜನೆಯನ್ನು ಈಗಲಾದರೂ ಜಾರಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿಸೂಚನೆ ದಿನಾಂಕ: ೧೫.೦೨.೨೦೧೩ ರಿಂದ ಜಾರಿಗೆ ಬಂದಿದ್ದು, ದಿನಾಂಕ: ೧೯.೦೯.೨೦೧೪ ರಲ್ಲಿ ಹೊರಡಿಸಿದ ಆದೇಶದ ರೀತ್ಯಾ ಆಯಾ ಇಲಾಖೆಯ ನೌಕರರನ್ನು ಅಧಿಸೂಚಿಸಿದ ದಿನಾಂಕದಿಂದ ಸೇವಾ ಸೌಲಭ್ಯಗಳನ್ನು ನೀಡಲು ಆದೇಶಿಸಿದ್ದು, ದಿನಾಂಕ: ೧೫.೦೨.೨೦೧೩ ರಿಂದಲೇ ಸೇವಾ ಸೌಲಭ್ಯಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಸೇವೆಯಲ್ಲಿದ್ದಾಗಲೇ, ಮರಣ ಹೊಂದಿದ ನೌಕರರು ಮತ್ತು ಸ್ವಯಂ ನಿವೃತ್ತಿ ಪಡೆದ ದಿನಗೂಲಿ ನೌಕರರಿಗೆ ಎಕ್ಸ್‌ಗ್ರೇಷಿಯಾ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ೩೦ ವರ್ಷಗಳಿಂದ ಅರ್ಧ ವೇತನಕ್ಕೆ ದಿನಗೂಲಿಯಲ್ಲಿ ಕಾರ್ಯನಿರ್ವಹಿಸಿ ಪ್ರಸ್ತುತ ಅನಾರೋಗ್ಯದಿಂದ ಬಳಲುತ್ತಿರುವ ಇವರ ಮತ್ತು ಇವರ ಕುಟುಂಬಕ್ಕೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ನಗರದಲ್ಲಿ ರಸ್ತೆ ಮಧ್ಯದಲ್ಲಿರುವ ಮ್ಯಾನ್‌ಹೋಲ್‌ಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೦೯ (೫೩೪) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿನ ಬಡಾವಣೆಗಳಲ್ಲಿ ರಸ್ತೆ ಮಧ್ಯದಲ್ಲಿರುವ ಎಷ್ಟು ಮ್ಯಾನ್‌ಹೋಲ್‌ಗಳನ್ನು ಮುಚ್ಚಿ ಸ್ಥಳಾಂತರಿಸಲಾಗಿದೆ ;

(ಆ) ಎಷ್ಟು ಮ್ಯಾನ್‌ಹೋಲ್‌ಗಳನ್ನು ಎಷ್ಟು ಬಾರಿ ದುರಸ್ಥಿ ಮಾಡಲಾಗಿದೆ ;

(ಇ) ಹಲವಾರು ವರ್ಷಗಳ ಹಿಂದೆ ಆಯಾಯ ಭಾಗದಲ್ಲಿ ಅಳವಡಿಸಿರುವ ಒಳಚರಂಡಿ ವ್ಯವಸ್ಥೆ ಪೂರ್ತಿ ಶಿಥಿಲಗೊಂಡಿದ್ದು, ಮುಖ್ಯ ರಸ್ತೆಗಳಲ್ಲಿ ಹಾದು ಹೋಗಿರುವ ಮ್ಯಾನ್‌ಹೋಲ್‌ಗಳು ಭಾರಿ ಸಂಚಾರದಿಂದ ಕುಸಿದು ಹೋಗಿದ್ದು, ಸಾಲುಗಟ್ಟಿ ನಿಲ್ಲುವ ವಾಹನ ದಟ್ಟಣೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಪರಿಹಾರ ಏನು ?

## ಕಳೆದ ವರ್ಷ ಸುರಿದ ಭಾರಿ ಮಳೆಗೆ ಬೆಂಗಳೂರು ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಬರುವ ರಸ್ತೆಗಳ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೧೦ (೫೫೧) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ವರ್ಷ ಬಿದ್ದ ಭಾರಿ ಮಳೆಗೆ ಬೆಂಗಳೂರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಕಂಡ ಭಾರಿ ಗುಂಡಿಗಳ ಪ್ರಮಾಣವೇನು ; (ವಿವರ ನೀಡುವುದು)

(ಆ) ಇವುಗಳ ಶೀಘ್ರ ದುರಸ್ತಿಗೆ ವಿಶೇಷವಾಗಿ ಹಣ ಬಿಡುಗಡೆ ಮಾಡಲಾಗಿತ್ತೆ ; ಯಾವ ಯಾವ ದಿನಾಂಕಗಳಂದು ಎಷ್ಟು ಹಣ ಬಿಡುಗಡೆ ಮಾಡಲಾಗಿತ್ತು;

(ಇ) ಬಿಡುಗಡೆ ಮಾಡಿದ ಹಣದಲ್ಲಿ ಎಷ್ಟು ಹಣ ಯಾವ ದಿನಾಂಕದಲ್ಲಿ ಖರ್ಚು ಮಾಡಲಾಯಿತು ; (ವಿವರ ನೀಡುವುದು)

(ಈ) ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚಿ, ರಸ್ತೆ ದುರಸ್ತಿಗೆ ಗಡುವು ನಿಗಧಿಪಡಿಸಲಾಗಿತ್ತೆ (ವಿವರ ನೀಡುವುದು)

(ಉ) ಪ್ರಸ್ತುತ ಇನ್ನೂ ಎಷ್ಟು ಪ್ರಮಾಣದಲ್ಲಿ ರಸ್ತೆ ಗುಂಡಿಗಳ ದುರಸ್ತಿ ಮಾಡುವುದು ಬಾಕಿಯಿದೆ ? (ವಿವರ ನೀಡುವುದು)

## ವಾರಾಹಿ ನದಿಯಿಂದ ಉಡುಪಿ ನಗರಕ್ಕೆ ಕುಡಿಯುವ ನೀರು ಸರಬರಾಜು ಯೋಜನೆಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೧ (೯೬೪) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಾರಾಹಿ ನದಿಯಿಂದ ಉಡುಪಿ ನಗರಕ್ಕೆ ಕುಡಿಯುವ ನೀರನ್ನು ಸರಬರಾಜು ಮಾಡುವ ಯೋಜನೆಯ ಸಂಬಂಧ ವಿಸ್ತೃತ ಯೋಜನಾ ವರದಿ (ಡಿ.ಪಿ.ಆರ್)ನ್ನು ತಯಾರಿಸಲಾಗಿದೆಯೇ ; ಹಾಗಿದ್ದಲ್ಲಿ, ಅಂದಾಜು ವೆಚ್ಚವೆಷ್ಟು ; (ವಿಸ್ತೃತ ಯೋಜನಾ ವರದಿ ಪ್ರತಿ ಒದಗಿಸುವುದು)

(ಆ) ಉಡುಪಿ ನಗರಕ್ಕೆ ಕುಡಿಯುವ ನೀರು ಸರಬರಾಜು ಯೋಜನೆಯಲ್ಲಿ ಕೊಳವೆ ಮಾರ್ಗವು ಹಾದು ಹೋಗುವ ಮಾರ್ಗದಲ್ಲಿರುವ ಗ್ರಾಮ ಪಂಚಾಯಿತಿಗಳು ಬೇಸಿಗೆಯಲ್ಲಿ ಕುಡಿಯುವ ನೀರಿನ ಅಭಾವದಿಂದಾಗಿ ಟ್ಯಾಂಕರ್ ಮೂಲಕ ನೀರು ಸರಬರಾಜು ಪಡೆಯುತ್ತಿದ್ದು ಮಾರ್ಗಮಧ್ಯೆಯ ಗ್ರಾಮಗಳಿಗೆ (enronte villages) ನೀರು ಒದಗಿಸುವ ನಿಯಮವನ್ನು ಮೀರಿ, ಕೊಳವೆ ಮಾರ್ಗ ಹಾದು ಹೋಗುವ ಗ್ರಾಮ ಪಂಚಾಯತಿಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸದೇ ನೇರವಾಗಿ ಉಡುಪಿಗೆ ಕೊಂಡೊಯ್ದು ಶುದ್ಧೀಕರಿಸಿ ನೀಡುವ ಉದ್ದೇಶದ ಔಚಿತ್ಯವೇನು;

(ಇ) ಕುಂದಾಪುರ ಪುರಸಭೆಗೆ ಜಪ್ತಿ ಗ್ರಾಮದ ವಾರಾಹಿ ನದಿ (ಜಂಭೂ)ಯಿಂದ ಶುದ್ಧ ಕುಡಿಯುವ ನೀರನ್ನು ಕೊಂಡೊಯ್ಯುವಾಗ ಮಾರ್ಗಮಧ್ಯೆಯ (enronte) ಗ್ರಾಮಪಂಚಾಯಿತ್‌ಗಳಿಗೆ ಒದಗಿಸಲಾಗುತ್ತಿದ್ದು, ಕುಂದಾಪುರ ಪುರಸಭೆಗೆ ಆರ್ಥಿಕವಾಗಿ ಹೊರೆಯಾಗದ ಈ ನೀತಿಯು, ಉಡುಪಿ ನಗರಸಭೆಗೆ ಕುಡಿಯುವ ನೀರು ಒದಗಿಸುವಾಗ ನಷ್ಟವಾಗುವುದು ಅಥವಾ ಆರ್ಥಿಕ ಹೊರೆಯಾಗುವುದು ಹೇಗೆ ;

(ಈ) ಉಡುಪಿ ನಗರಕ್ಕೆ ಕುಡಿಯುವ ನೀರು ಪೂರೈಸುವ ನೆಪದಲ್ಲಿ ವಾರಾಹಿ ನದಿಯಿಂದ ನೀರನ್ನು ಮೇಲೆತ್ತಿ ಸುವರ್ಣನದಿಗೆ ಹರಿಸುವ ಮೂಲ ಉದ್ದೇಶವು ಖಾಸಗಿ ವಿದ್ಯುತ್ ಉತ್ಪಾದನಾ ಕೇಂದ್ರಗಳಿಗೆ ಅನುಕೂಲ ಮಾಡಿಕೊಡುವ ಹುನ್ನಾರವನ್ನು ಹೊಂದಿದೆ ಎನ್ನುವುದು ನಿಜವೇ ; ಇಲ್ಲದೇ ಇದ್ದಲ್ಲಿ, ನೀರು ಮೇಲೆತ್ತುವ ಮೂಲದಲ್ಲಿಯೇ, ಶುದ್ಧೀಕರಿಸಿ, ಮಾರ್ಗಮಧ್ಯೆಯ ಗ್ರಾಮ ಪಂಚಾಯಿತಿಗಳಿಗೆ ವಿತರಿಸಿ, ಉಡುಪಿ ನಗರಕ್ಕೆ ಕೊಂಡೊಯ್ಯದಿರಲು ಕಾರಣವೇನು ?

## ಅಕ್ರಮವಾಗಿ ಬಂದ ವಲಸಿಗರ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೨ (೧೦೧೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಕ್ರಮವಾಗಿ ವಲಸೆ ಬಂದ ವಲಸಿಗರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಕ್ರಮ ವಲಸಿಗರಿಂದ ರಾಜ್ಯದ ಆಂತರಿಕ ಭದ್ರತೆಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ;

(ಇ) ಅಕ್ರಮ ವಲಸಿಗರನ್ನು ಮತದಾನ ಪ್ರಕ್ರಿಯೆಯಿಂದ ಹೊರಗಿಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ;

(ಈ) ಮಲೆನಾಡು ಪ್ರದೇಶಗಳಲ್ಲಿ ಕೂಲಿ ಕಾರ್ಮಿಕರಾಗಿ ಬಂದ ವಲಸಿಗರು ನಡೆಸುತ್ತಿರುವ ಅಪರಾಧಗಳನ್ನು ಹತೋಟಿಗೆ ತರಲಾಗಿದೆಯೇ ?

## ಆರ್ಥಿಕ ಇಲಾಖಾ ಅಂಕಿ ಅಂಶ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೧೧೩ (೯೫೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಕರ್ನಾಟಕ ರಾಜ್ಯ ಸರ್ಕಾರದ ಒಟ್ಟು ಸಾಲಗಳ ಪ್ರಮಾಣ ಎಷ್ಟು ; ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯ ಸರ್ಕಾರದ ರಾಜಸ್ವದ ಪ್ರಮಾಣ ಎಷ್ಟು ; ರಾಜಸ್ವದಲ್ಲಿ ರಾಜ್ಯ ತೆರಿಗೆ, ಕೇಂದ್ರ ತೆರಿಗೆ, ಕೇಂದ್ರದ ಅನುದಾನ ಹಾಗೂ ತೆರಿಗೇತರ ಜಮಾ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯದ ಜನರ ತಲಾವಾರು ಆದಾಯ ಎಷ್ಟು ಹಾಗೂ ತಲಾವಾರು ಅಭಿವೃದ್ಧಿ ವೆಚ್ಚ ಎಷ್ಟು ; ಆಯವ್ಯಯ ಅಂದಾಜಿನ ಪ್ರಕಾರ ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ತೆರಿಗೆ ಸಂಗ್ರಹದ ಪ್ರಮಾಣ ಎಷ್ಟು ; ಕಳೆದ ಐದು ವರ್ಷಗಳಲ್ಲಿ ತೆರಿಗೆ ಸಂಗ್ರಹದ ಪ್ರಮಾಣ ಕುಸಿತವಾಗಿದೆಯೇ ; ಕುಸಿತವಾಗಿದ್ದಲ್ಲಿ, ಇದರ ಮಾಹಿತಿಯನ್ನು ನೀಡುವುದು ;

(ಇ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಆಯವ್ಯಯದ ಅಂದಾಜಿನ ಪ್ರಕಾರ ರಾಜ್ಯ ಸರ್ಕಾರವು ಮಾಡಿರುವ ಅಭಿವೃದ್ಧಿ ವೆಚ್ಚ ಎಷ್ಟು ; ಅಭಿವೃದ್ಧಿಯೇತರ ವೆಚ್ಚ ಎಷ್ಟು ; ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯ ಸರ್ಕಾರದ

ಯೋಜನೆ ಮತ್ತು ಯೋಜನೇತರ ವೆಚ್ಚಗಳು ಎಷ್ಟು ; ಇದರ ಪ್ರಮಾಣ ಕುಂಠಿತವಾಗಿದೆಯೇ ; ಕುಂಠಿತವಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಈ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಪರಿಷ್ಕೃತ ಅಂದಾಜಿನ ಮುಖಾಂತರ ಯಾವ ಯಾವ ಇಲಾಖೆಗೆ ಹೆಚ್ಚುವರಿ ಹಣವನ್ನು ಅನುದಾನದ ಮುಖಾಂತರ ನೀಡಲಾಗಿದೆ ; ವಿದೇಶಿ ನೆರವಿನ ಯೋಜನೆ ಮುಖಾಂತರ ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಯಾವ ಯಾವ ಯೋಜನೆಗಳನ್ನು ಯಾವ ಯಾವ ಇಲಾಖೆಯಲ್ಲಿ ಯಾವ ಯಾವ ಮೊತ್ತಕ್ಕೆ ಅನುಗುಣವಾಗಿ ಜಾರಿಗೊಳಿಸಲಾಗಿದೆ; ಬಾಕಿಯಿರುವ ಕಾಮಗಾರಿಗಳು ಎಷ್ಟು ? (ಯೋಜನೆ ಮತ್ತು ಕಾಮಗಾರಿಗಳ ವಿವರ ನೀಡುವುದು)

## ಮಂಗಳೂರು ನಗರದಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೋಗುವ ನಗರ ಪಾಲಿಕೆ ವ್ಯಾಪ್ತಿಯ ರಸ್ತೆಯ ಅಗಲೀಕರಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೧೪ (೯೫೦) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಗಳೂರು ನಗರದಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೋಗುವ ನಗರ ಪಾಲಿಕೆ ವ್ಯಾಪ್ತಿಯ ನಂತರದ ರಸ್ತೆ ಅಗಲೀಕರಣಕ್ಕೆ ಯೋಜನೆ ಸಿದ್ಧಪಡಿಸಲಾಗಿದೆಯೇ ; (ವಿವರ ನೀಡುವುದು) ಈ ರಸ್ತೆಯ ಅಗಲೀಕರಣಕ್ಕೆ ಇರುವ ಅಡ್ಡಿಗಳೇನು ;

(ಆ) ಈ ರಸ್ತೆಯ ಅಗಲೀಕರಣಕ್ಕೆ ಸೇತುವೆ ನಿರ್ಮಾಣಕ್ಕೆ ತಗಲುವ ವೆಚ್ಚದ ಅಂದಾಜು ಮೊತ್ತ ಎಷ್ಟು ?

## ಕಳೆದ ೩ ವರ್ಷಗಳಲ್ಲಿ ಗದಗ, ಧಾರವಾಡ, ಹಾವೇರಿ ಹಾಗೂ ಕಾರವಾರ ಜಿಲ್ಲೆಗಳಲ್ಲಿ ನಡೆದಿರುವ ಅಪರಾಧ ಪ್ರಕರಣಗಳ ಬಗ್ಗೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೧೫ (೯೬೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗದಗ, ಧಾರವಾಡ, ಹಾವೇರಿ ಹಾಗೂ ಕಾರವಾರ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಕೊಲೆ, ಅಪಹರಣ, ಅತ್ಯಾಚಾರ (ಮಹಿಳೆ ಮತ್ತು ಮಕ್ಕಳು) ಸರಗಳ್ಳತನ, ಮನೆ ದರೋಡೆ ಇತ್ಯಾದಿ ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು, ವರ್ಷವಾರು ಹಾಗೂ ಪ್ರಕರಣವಾರು ವಿವರ ನೀಡುವುದು)

(ಆ) ಈ ಪೈಕಿ ಪತ್ತೆ ಹಚ್ಚಲಾದ ಪ್ರಕರಣಗಳು ಎಷ್ಟು ; (ವಿವರ ನೀಡುವುದು)

(ಇ) ಈ ಪ್ರಕರಣಗಳ ಕುರಿತು ಇನ್ನು ತನಿಖಾ ಹಂತದಲ್ಲೇ ಇರುವ ಪ್ರಕರಣಗಳು ಎಷ್ಟು ; (ವಿವರ ನೀಡುವುದು)

(ಈ) ಈ ಪ್ರಕರಣಗಳ ಕುರಿತು ಯಾವುದೇ ಸುಳಿವು ಸಿಗದೆ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಅವು ಯಾವುವು ? (ವಿವರ ನೀಡುವುದು)

## ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)** –

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)** –

೧೧೬ (೯೬೮+೧೧೧೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಳೆದ ೨೦೧೩–೧೪ ರಿಂದ ಇಲ್ಲಿಯವರೆಗೆ ದಲಿತರ ಮೇಲೆ ನಡೆದಂತಹ ಕೊಲೆ, ಅತ್ಯಾಚಾರ, ಇತರೆ ದೌರ್ಜನ್ಯ ಪ್ರಕರಣಗಳು ಎಷ್ಟು ; (ವರ್ಷಾವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಈ ಪ್ರಕರಣಗಳಲ್ಲಿ ಇತ್ಯರ್ಥವಾದ ಪ್ರಕರಣಗಳೆಷ್ಟು ; ಇತ್ಯರ್ಥವಾಗದ ಬಾಕಿ ಪ್ರಕರಣಗಳೆಷ್ಟು ;

(ಇ) ಪೊಲೀಸ್ ಅಧಿಕಾರಿಗಳು ರಾಜಿ ಸಂಧಾನ ನಡೆಸಿ, ಪ್ರಕರಣಗಳನ್ನು ಮುಚ್ಚಿಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಈ ರೀತಿ ದಲಿತರ ಮೇಲಿನ ದೌರ್ಜನ್ಯಗಳನ್ನು ತಡೆಯಲು ಸರ್ಕಾರ ಕೈಗೊಂಡ ಅಗತ್ಯ ಮುನ್ನೆಚ್ಚರಿಕೆಯ ಕ್ರಮಗಳೇನು ; (ವಿವರ ನೀಡುವುದು)

(ಉ) ಮಕ್ಕಳ ಮೇಲೆ ನಡೆದ ಅತ್ಯಾಚಾರದ ಪ್ರಕರಣಗಳ ಸಂಖ್ಯೆ ಎಷ್ಟು ; ಕೊಲೆಯಾದ ಪ್ರಕರಣಗಳ ಸಂಖ್ಯೆ ಎಷ್ಟು ; ನಾಪತ್ತೆಯಾದ ಪ್ರಕರಣಗಳ ಸಂಖ್ಯೆ ಎಷ್ಟು ; ಶಿಕ್ಷೆಗೆ ಒಳಪಡಿಸಿದವರ ಸಂಖ್ಯೆ ಎಷ್ಟು ; ಬಿ.ವರದಿ ಹಾಕಿ ವಜಾ ಮಾಡಲಾದ ಪ್ರಕರಣಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸೈಬರ್ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೧೧೭ (೫೪೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಿಲಿಕಾನ್ ಸಿಟಿಯಲ್ಲಿ ಸೈಬರ್ ಖದೀಮರನ್ನು ಮಟ್ಟ ಹಾಕಲು ಹೊಸದಾಗಿ ಸ್ಥಾಪಿಸಿರುವ ಸೈಬರ್ ಠಾಣೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು/ ಸಿಬ್ಬಂದಿಗಳ ವಿವರ ನೀಡುವುದು ;

(ಆ) ಈ ಸೈಬರ್ ಠಾಣೆಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಉಳಿದ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು;

(ಇ) ಈ ಸೈಬರ್ ಠಾಣೆಗಳಲ್ಲಿ ಇಲ್ಲಿಯವರೆಗೂ ಎಷ್ಟು ಕೇಸ್‌ಗಳು ದಾಖಲಾಗಿವೆ; ಅವುಗಳಲ್ಲಿ ಇತ್ಯರ್ಥವಾದ ಪ್ರಕರಣಗಳ ಸಂಖ್ಯೆ ಎಷ್ಟು ; ಉಳಿದ ಪ್ರಕರಣಗಳು ಯಾವ ಹಂತದಲ್ಲಿ ಇವೆ ?

## ನೂತನ ಪಿಂಚಣಿ ವ್ಯವಸ್ಥೆ ಯೋಜನೆ ರದ್ಧತಿ ಬಗ್ಗೆ

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) –**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೮ (೯೭೧+೧೦೨೭+೯೮೦+೧೦೧೦+೫೫೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ನೌಕರರು ಹೊಸ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಲು ಆಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವರ ಆಗ್ರಹವನ್ನು ಪರಿಗಣಿಸಿ, ಸರ್ಕಾರ ಹಳೆ ಪಿಂಚಣಿ ವ್ಯವಸ್ಥೆಯನ್ನು ಮತ್ತೆ ಜಾರಿಗೊಳಿಸುವ ಕ್ರಮ ಕೈಗೊಳ್ಳುವುದೇ ;

(ಆ) ಇದಕ್ಕೆ ಇರುವ ಅಡೆತಡೆಗಳೇನು ; ಈ ಅಡೆತಡೆಗಳ ನಿವಾರಣೆಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ;

(ಇ) ನೂತನ ಪಿಂಚಣಿ ವ್ಯವಸ್ಥೆ ಅಡಿಯಲ್ಲಿ ಈಗಾಗಲೇ ನಿವೃತ್ತಿ ಹಾಗೂ ಮರಣ ಹೊಂದಿದ ನೌಕರರ ಸಂಖ್ಯೆ ಎಷ್ಟು ; ನೂತನ ಪಿಂಚಣಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ನೌಕರರು ನಿವೃತ್ತಿ/ನಿಧನ/ಸ್ವಯಂ ನಿವೃತ್ತಿ ಹೊಂದಿದ ಸಂದರ್ಭದಲ್ಲಿ ಅವರಿಗೆ ಹಾಗೂ ಅವರ ಕುಟುಂಬದವರಿಗೆ ಸಿಗಬಹುದಾದಂತಹ ಸೌಲಭ್ಯಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ನೂತನ ವಂತಿಗೆ ಆಧಾರಿತ ಪಿಂಚಣಿ ಯೋಜನೆಯು ಯಾವ ದಿನಾಂಕದಿಂದ ಜಾರಿಗೆ ಬಂದಿದೆ ;

(ಉ) ನೂತನ ಪಿಂಚಣಿಗೆ ಒಳಪಡುವ ಒಟ್ಟು ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; (ಇಲಾಖಾವಾರು–ಜಿಲ್ಲಾವಾರು ವಿವರ ನೀಡುವುದು)

(ಊ) ನೂತನ ಪಿಂಚಣಿ ಯೋಜನೆ ವ್ಯವಸ್ಥೆ ಹಾಗೂ ಹಳೆಯ ಪಿಂಚಣಿ ಯೋಜನೆ ವ್ಯವಸ್ಥೆಯ ತುಲನಾತ್ಮಕ ವಿವರ ಹಾಗೂ ಸೌಲಭ್ಯಗಳವಾರು ಮಾಹಿತಿ ನೀಡುವುದು ;

(ಋ) ಹಳೆಯ ಪಿಂಚಣಿ ಯೋಜನೆಯನ್ನು ದೇಶದ ಯಾವ ರಾಜ್ಯಗಳಲ್ಲಿ ಮುಂದುವರಿಸಲಾಗಿದೆ ;

(ಎ) ಅದೇ ರೀತಿ ಹಳೆಯ ಪಿಂಚಣಿ ಯೋಜನೆಯನ್ನು ನಮ್ಮ ರಾಜ್ಯದಲ್ಲಿಯೂ ಪುನಃ ಅಳವಡಿಸಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಏ) ರಾಜ್ಯ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಯೋಜನೆಯನ್ನು ಜಾರಿ ಮಾಡಲು ಕೇಂದ್ರ ಸರ್ಕಾರವು ಕಡ್ಡಾಯಗೊಳಿಸಿದೆಯೇ ; ಕಡ್ಡಾಯಗೊಳಿಸಿದ್ದಲ್ಲಿ, ಆದೇಶಗಳ ವಿವರ ಒದಗಿಸುವುದು ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಪಾದಚಾರಿ ಮಾರ್ಗಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)** –

೧೯೯ (೧೦೨೪) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪಾದಚಾರಿ ಮಾರ್ಗಗಳ ಮೇಲೆ ಯಾವುದೇ ರೀತಿಯ ವ್ಯಾಪಾರ ಮಾಡಬಾರದೆಂದು ಯಾವುದಾದರೂ ನ್ಯಾಯಾಲಯದ ಆದೇಶಗಳು ಇದೆಯೇ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಗರದ ಪಾದಚಾರಿ ಹಾಗೂ ರಸ್ತೆಗಳ ವ್ಯಾಪಾರಿಗಳಿಗೆ ಗುರುತಿನ ಚೀಟಿ ನೀಡುವ ಬಗ್ಗೆ ಕಾನೂನಿನಲ್ಲಿ ಅವಕಾಶ ಇದೆಯೇ ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆ ಹಾಗೂ ಬೆಂಗಳೂರು ಡೆಂಟಲ್ ಕಾಲೇಜು (ಕೆ.ಆರ್.ರಸ್ತೆ) ಈ ಪಾದಚಾರಿ ಮಾರ್ಗದಲ್ಲಿ ಶಾಶ್ವತವಾಗಿ ನೆಲೆಗೊಂಡಿರುವ ಅಂಗಡಿಗಳ ಬಗ್ಗೆ ಪಾಲಿಕೆ/ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆ ಹಾಗೂ ಬೆಂಗಳೂರು ಡೆಂಟಲ್ ಕಾಲೇಜು (ಕೆ.ಆರ್.ರಸ್ತೆ) ಈ ಪಾದಚಾರಿ ಮಾರ್ಗದಲ್ಲಿ ಶಾಶ್ವತವಾಗಿ ನೆಲೆಗೊಂಡಿರುವ ಅಂಗಡಿಗಳ ಬಗ್ಗೆ ನ್ಯಾಯಾಲಯದಿಂದ ತೆರವುಗೊಳಿಸಲು ತಡೆಯಾಜ್ಞೆ ಇದೆಯೇ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಉ) ಅದೇ ರೀತಿ ಗಾಂಧಿಬಜಾರ್, ಮಲ್ಲೇಶ್ವರಂ, ಜಯನಗರ, ಇಂದಿರಾನಗರ, ಜೆ.ಪಿ.ನಗರ ಇತ್ಯಾದಿ ಪ್ರದೇಶಗಳಲ್ಲಿ ಇರುವ ಪಾದಚಾರಿ ಮಾರ್ಗದಲ್ಲಿ ಶಾಶ್ವತವಾಗಿ ನೆಲೆಗೊಂಡಿರುವ ಅಂಗಡಿಗಳ ಬಗ್ಗೆ ಪಾಲಿಕೆ/ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಊ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ೧೪೩ರ ಪಾರ್ವತಿಪುರ ೨ನೇ ಮುಖ್ಯರಸ್ತೆ ಲಾಲ್‌ಬಾಗ್ ಪೋರ್ಟ್‌ರಸ್ತೆಯು ಪೂರ್ತಿ ಆಟೋ ರಿಪೇರಿ ಹಾಗೂ ವಾಹನ ನಿಲ್ದಾಣವಾಗಿರುವುದರಿಂದ ಮಕ್ಕಳು, ಮಹಿಳೆಯರು ಹಾಗೂ ಹಿರಿಯ ನಾಗರೀಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಸ್ತೆಯಲ್ಲಿ ವರ್ಕ್‌ಶಾಪ್ ನಡೆಸಲು ಯಾವ ಕಾನೂನಿನಲ್ಲಿ ಅನುಮತಿ ನೀಡಲಾಗಿದೆ ? (ದಾಖಲಾತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ವಾರ್ತಾ ಇಲಾಖೆಯ ಜಾಹೀರಾತಿನ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೦ (೯೨೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೭–೧೮ನೇ ಸಾಲಿನಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಸರ್ಕಾರ ನಿಗಧಿಪಡಿಸಿದ್ದ ಅನುದಾನವೆಷ್ಟು ; (ವಿವರ ನೀಡುವುದು)

(ಆ) ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಎಷ್ಟು ಹಣವನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಿಕೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಒಂದು ವರ್ಷದಿಂದ ಸರ್ಕಾರದ ಸಾಧನೆಗಳ ಬಗ್ಗೆ ಜಾಹೀರಾತಿಗಾಗಿ ಸರ್ಕಾರ ಖರ್ಚು ಮಾಡಿರುವ ಹಣವೆಷ್ಟು ; (ವಿವರ ನೀಡುವುದು)

(ಈ) ಈ ಜಾಹೀರಾತನ್ನು ನೀಡಲು ಯಾವ ಯಾವ ಕಂಪನಿಗಳಿಗೆ ವಹಿಸಿಕೊಡಲಾಗಿದೆ ಮತ್ತು ಇದಕ್ಕಾಗಿ ಟೆಂಡರ್ ಕರೆದು ವಹಿಸಿಕೊಡಲಾಗಿದೆಯೇ; ಹಾಗಿದ್ದಲ್ಲಿ, ಕಂಪನಿಗಳ ವಿಳಾಸ ಆ ಕಂಪನಿಯ ಹಿನ್ನೆಲೆಯೇನು ಎಂಬ ಬಗ್ಗೆ ಸಂಪೂರ್ಣವಾಗಿ ಮಾಹಿತಿ ಒದಗಿಸುವುದು ;

(ಉ) ಸಾರ್ವಜನಿಕರು ತೆರಿಗೆ ರೂಪದಲ್ಲಿ ಸರ್ಕಾರಕ್ಕೆ ಸಂದಾಯ ಮಾಡುವ ಹಣವನ್ನು ನಿಮ್ಮ ಸಾಧನೆಯ ಪ್ರಗತಿ ಇಲ್ಲದಿದ್ದರೂ, ಈ ರೀತಿ ಜಾಹೀರಾತು ನೀಡಿ ದುಂದು ವೆಚ್ಚ ಮಾಡುವುದು ಸರಿಯೇ ; (ವಿವರ ನೀಡುವುದು)

(ಊ) ಇನ್ನು ಮುಂದಾದರೂ ಸಾರ್ವಜನಿಕರ ತೆರಿಗೆ ಹಣವನ್ನು ಉಳಿಸಿ ಈ ಹಣವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲು ಮುಂದಾಗುವುದೇ ? (ವಿವರ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಫಿ7, ಕಾ.ಸೂ. 984, ಪ್ರತಿಗಳು 1500